# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 35
ಸದಸ್ಯರ ಹೆಸರು : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 09-07-2018
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು.

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಸರ್ಕಾರದ ಹೆಚ್ಚಿನ ಎಲ್ಲಾ ಕಛೇರಿ ಸಿಬ್ಬಂದಿಗಳ ಹಾಜರಾತಿಯನ್ನು ಬಯೋಮೆಟ್ರಿಕ್ ಯಂತ್ರದ ಮೂಲಕ ದಾಖಲಿಸಲಾಗುತ್ತಿದ್ದು, ಗ್ರಾಮ ಪಂಚಾಯತಿಗಳಲ್ಲೂ ಸಹ ಇಲಾಖಾ ಸಿಬ್ಬಂದಿಗಳ ಕರ್ತವ್ಯ ದಕ್ಷತೆಯನ್ನು ಹೆಚ್ಚಿಸಲು ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯನ್ನು ಅಳವಡಿಸಲಾಗುವುದೆ; ಅಳವಡಿಸಲಾಗುವುದಾದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು; ಇಲ್ಲವಾದಲ್ಲಿ ಕಾರಣವೇನು; | ರಾಜ್ಯದ 6022 ಗ್ರಾಮ ಪಂಚಾಯತಿಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯನ್ನು ಅಳವಡಿಸಲಾಗಿದೆ. |
| ಆ | ಗ್ರಾಮ ಪಂಚಾಯತಿಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯನ್ನು ಅಳವಡಿಸುವುದಾದಲ್ಲಿ ಇದರ ಮೇಲ್ವಿಚಾರಣೆಯನ್ನು ಯಾರಿಗೆ ನೀಡಲಾಗುವುದು; | ಗ್ರಾಮ ಪಂಚಾಯತಿಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯ ನಿರ್ವಹಣೆಯನ್ನು ಸಂಬಂಧಿಸಿದ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಾಡುವರು. |
| ಇ | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಈಗಾಗಲೇ ಯಾವುದಾದರೂ ಗ್ರಾಮ ಪಂಚಾಯತಿಗಳು ಬಯೋಮೆಟ್ರಿಕ್ ಹಾಜರಾತಿಯ ವ್ಯವಸ್ಥೆಯನ್ನು ಅಳವಡಿಸಿಕೊಂಡಿವೆಯೇ; ಅಳವಡಿಸಿಕೊಂಡಿದ್ದಲ್ಲಿ ಇದರ ನಿರ್ವಹಣೆಯ ಹೊಣೆಯನ್ನು ನಿರ್ವಹಿಸುವ ಅಧಿಕಾರಿ ಯಾರು? (ತಾಲ್ಲೂಕುವಾರು ವಿವರ ನೀಡುವುದು) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯನ್ನು ಅಳವಡಿಸಲಾಗಿದೆ.<br><br>ಗ್ರಾಮ ಪಂಚಾಯತಿಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯ ನಿರ್ವಹಣೆಯನ್ನು ಸಂಬಂಧಿಸಿದ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಾಡುವರು.<br>ಬಯೋಮೆಟ್ರಿಕ್ ಹಾಜರಾತಿ ಆಧರಿಸಿ ಗ್ರಾಮ ಪಂಚಾಯಿತಿ ನೌಕರರಿಗೆ ಸಂಬಂಧಿಸಿದಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸಂಬಂಧಿಸಿದಂತೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮಕೈಗೊಳ್ಳುವರು. |

ಸಂಖ್ಯೆ: ಗ್ರಾಅಪ 638 ಗ್ರಾಪಂಅ 2018

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್,
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು
ಹಾಗೂ ಸಂಸದೀಯ ವ್ಯವಹಾರಗಳ ಸಚಿವರು.